		ಪುರ	ಯೂರು	ಪುರ	ಣಾ
1	ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ	50	60	–	–
2	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ	120	121	25	18

(ಸಕಇ 36 ಎಸ್‌ಡಿಸಿ 2009)

(ಡಿ.ಸುಧಾಕರ್)
ಸಮಾಜ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ.

129 ಶ್ರೀ.ಪ್ರತಾಪ್‌ಗೌಡ ಪಾಟೀಲ್(ಮಸ್ಕಿ)
ಶ್ರೀ.ಡಿ.ಸುಧಾಕರ, ಮಾನ್ಯ ಸಮಾಜ ಕಲ್ಯಾಣ ಸಚಿವರು

ಅ) ಪರಿಶಿಷ್ಟ ಜಾತಿಯ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವಂತಹ 10,000–00 ರೂ.ಗಳ ಸಹಾಯಧನವನ್ನು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಸ್ತ್ರೀ ಶಕ್ತಿ ಸಂಘಗಳಿಗೂ ಕೊಡುವ ವಿಚಾರ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಂದಿನಿಂದ ನೀಡಲಾಗುವುದು?

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ

ಪರಿಶಿಷ್ಟ ಜಾತಿಯ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವಂತಹ 10,000/– ರೂ.ಗಳ ಸಹಾಯಧನವನ್ನು ಹಿಂದುಳಿದ ವರ್ಗಗಳ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವ ವಿಚಾರವಿರುವುದಿಲ್ಲ.

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಮಹಿಳೆಯರು ರಚಿಸಿಕೊಂಡಿರುವ ಸ್ತ್ರೀ ಶಕ್ತಿ ಸಂಘಗಳಿಗೆ ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮ, ನವದೆಹಲಿ ಇವರ ಆರ್ಥಿಕ ನೆರವಿನೊಂದಿಗೆ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ನ್ಯೂ ಸ್ವರ್ಣಿಮಾ ಯೋಜನೆಯಲ್ಲಿ ಸ್ತ್ರೀ ಶಕ್ತಿ ಗುಂಪುಗಳಲ್ಲಿನ ಹಿಂದುಳಿದ ವರ್ಗಗಳ ಮಹಿಳೆಯರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳಿಗೆ ಶೇ.4ರ ಬಡ್ಡಿದರದಲ್ಲಿ ಒಂದು ಸ್ತ್ರೀ ಶಕ್ತಿ ಸಂಘಕ್ಕೆ ರೂ.1.00ಲಕ್ಷದಿಂದ ರೂ.1.50ಲಕ್ಷಗಳವರೆಗೆ ಸಾಲವನ್ನು ಕೊಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ:

ಪರಿಶಿಷ್ಟ ಜಾತಿಯ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವಂತಹ 10,000/- ರೂ.ಗಳ ಸಹಾಯಧನವನ್ನು ಪರಿಶಿಷ್ಟ ಪಂಗಡಗಳ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವ ವಿಚಾರ ಪರಿಶೀಲನೆಯಲ್ಲಿದೆ.

ಸಂಖ್ಯೆ:ಸಕಇ 35 ಪವಯೋ 2009

(ಡಿ.ಸುಧಾಕರ)
ಸಮಾಜ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

131 ಶ್ರೀ. ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಅ) ಕೊಪ್ಪಳ ನಗರದ ಜಿಲ್ಲಾ ಆಸ್ಪತ್ರೆ ಕಟ್ಟಡದ ಕಾಮಗಾರಿಯು ಪ್ರಾರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಜಿಲ್ಲಾ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಕೊಪ್ಪಳ ಜಿಲ್ಲಾಡಳಿತವು ಸ್ವಾಧೀನ ಪಡಿಸಿಕೊಂಡಿರುವ ಜಮೀನು (ಸ.ನಂ.205/2,266 ಮತ್ತು 267/1 ಒಟ್ಟು 9.30 ಎಕರೆ) ವಿವಾಧ ಉಚ್ಚನ್ಯಾಯಾಲಯದಲ್ಲಿ ಇರುವುದರಿಂದ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ.

ಆ) ಹಾಗಿದ್ದಲ್ಲಿ, ಈ ಕಟ್ಟಡ ಕಾಮಗಾರಿಗಾಗಿ ಸರ್ಕಾರ ಈವರೆಗೂ ಖರ್ಚು ಮಾಡಿರುವ ಮೊತ್ತ ಎಷ್ಟು?

ಈವರೆಗೂ ಹಣ ಖರ್ಚು ಮಾಡಿರುವುದಿಲ್ಲ.

ಇ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಈಗ ನೀಡಿರುವ ಅನುದಾನ ಸಾಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉದ್ಭವಿಸುವುದಿಲ್ಲ.

ಈ) ಹಾಗಿದ್ದಲ್ಲಿ, ಬಿಡುಗಡೆ ಮಾಡಲಾಗುವ ಅನುದಾನದ ಪ್ರಮಾಣ ಎಷ್ಟು ಹಾಗೂ ಯಾವಾಗ ಬಿಡುಗಡೆ ಮಾಡಲಾಗುವುದು?

ಉದ್ಭವಿಸುವುದಿಲ್ಲ.

ಉ) ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಜಿಲ್ಲಾ ಆಸ್ಪತ್ರೆ ಕೊಪ್ಪಳ ಜಿಲ್ಲೆ, ಇಲ್ಲಿ ಮಂಜೂರಾದ 10 ತಜ್ಞ ವೈದ್ಯರ ಹುದ್ದೆಗಳ ಪೈಕಿ 7 ತಜ್ಞ ವೈದ್ಯರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಸದರಿ ಆಸ್ಪತ್ರೆಯಲ್ಲಿ ಇಟ್ಟು 63 ಅರೆ ವೈದ್ಯಕೀಯ ಸಿಬ್ಬಂದಿ ಹುದ್ದೆ ಮಂಜೂರಾಗಿದ್ದು, 27 ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. 36 ಹುದ್ದೆಗಳು ಖಾಲಿ ಇವೆ.